Govt. of Karnataka [C.R.P. 67

Deposition Sheets (R.P. No. 57) Form No. 4 (Criminal)

**ಅಧಿಕ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ, ಶಿರಾ ,**

**ಪ್ರಕರಣ ಸಂಖ್ಯೆ:74/2019**

| **ದಿನಾಂಕಃ 14.08.2026**ರಂದು ಸಾಕ್ಷಿಗೆ ಪ್ರಮಾಣ ವಚನವನ್ನು ಭೋದಿಸಲಾಯಿತು. | | | |
|---|---|---|---|
| ಸಿಡಬ್ಲ್ಯೂ ಃ | 18 | ಪಿಡಬ್ಲ್ಯೂ | 13 |
| ಹೆಸರು | ಭಾರತಿ ಎಸ್ ಸಿ | | |
| ತಂದೆ ಹೆಸರು | ಚಿಕ್ಕರೇವಣ್ಣ | | |
| ವಯಸ್ಸು | 52 | | |
| ಉದ್ಯೋಗ | ಪಿ ಎಸ್ ಐ, ತುಮಕೂರು ಗ್ರಾಮಾಂತರ ಪೊಲೀಸ್ ಠಾಣೆ | | |
| ವಾಸ | ತುಮಕೂರು | | |

**ಮುಖ್ಯ ವಿಚಾರಣೆಃ ಎ ಪಿ ಪಿ ರವರಿಂದಃ**

ನಾನು 15.04.2018 ರಿಂದ 24.08.2019 ರವರೆಗೆ ಎ ಎಸ್ ಐ ಆಗಿ ಪಟ್ಟನಾಯಕನಹಳ್ಳಿ ಪೊಲೀಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ13.10.2018 ರಂದು ಮದ್ಯಾಹ್ನ 12.30 ಗಂಟೆಗೆ ಪರಿಯಾದಿ ಠಾಣೆಗೆ ಹಾಜರಾಗಿ ಅಪಘಾತವಾಗಿದೆ ಎಂದು ನೀಡಿದ ದೂರನ್ನು ಪಡೆದು ಠಾಣಾ ಮೋ. ಸಂಖ್ಯೆ 89/2018 ಎಂದು ಕಲಂ 279, 337 ಮತ್ತು 338 IPC ರಡಿಯಲ್ಲಿ ಪ್ರಕರಣವನ್ನು ದಾಖಲಿಸಿ ಪ್ರ.ವ.ವ ಅನ್ನು ನ್ಯಾಯಾಲಯಕ್ಕೆ ನೀಡಿರುತ್ತೇನೆ. ಸದರಿ ದೂರಿನಲ್ಲಿ ನನ್ನ ಸಹಿ ಇರುತ್ತದೆ. (ಸದರಿ ದೂರನ್ನು ಈಗಾಗಲೇ ನಿಪಿ-1 ಎಂದು ಗುರುತಿಸಲಾಗಿದ್ದು ಸಾಕ್ಷಿಯ ಸಹಿಯನ್ನು ನಿಪಿ-1 ಬಿ ಎಂದು ಹಾಗೂ ಪ್ರ.ವ.ವ. ಅನ್ನು ನಿಪಿ-6 ಎಂದು ಗುರುತಿಸಲಾಯಿತು.) ಅದೇ ದಿನ ಅಪಘಾತ ಸ್ಥಳಕ್ಕೆ ಹೋಗಿ ಚಾಸಾ-9 ಮತ್ತು 10 ರವರನ್ನು ಸ್ಥಳಕ್ಕೆ ಬರಮಾಡಿಕೊಂಡು ಅವರ ಸಮಕ್ಷಮ ಸ್ಥಳ ಪಂಚನಾಮೆಯನ್ನು ಮದ್ಯಾಹ್ನ 2.00 ರಿಂದ 3.00 ಗಂಟೆಯವರೆಗೆ ಮಾಡಿರುತ್ತೇನೆ. ಸದರಿ ಪಂಚನರಾಮೆಯಲ್ಲಿ ನನ್ನ ಸಹಿ ಇರುತ್ತದೆ. (ಸದರಿ ಸ್ಥಳ ಪಂಚನಾಮೆಯನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು ಸಾಕ್ಷಿಯ ಸಹಿಯನ್ನು ನಿಪಿ-2ಸಿ ಎಂದು ಗುರುತಿಸಲಾಯಿತು.) ಅದೇ ದಿನ ಚಾಸಾ-4, 6, 1, 7 ಮತ್ತು 5 ರವ

ಹೇಳಿಕೆಯನ್ನು ಪಡೆದಿರುತ್ತೇನೆ. ನಂತರ ಮುಂದಿನ ತನಿಕೆಗಾಗಿ ಕಡತವನ್ನು ಚಾಸಾ-19 ರವರಿಗೆ ನೀಡಿರುತ್ತೇನೆ.

**<u>ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ</u>**

ಪಂಚನಾಮೆಯು ಕೈ ಬರಹದಲ್ಲಿ ಇರುತ್ತದೆ. ಸ್ಥಳ ಪಂಚನಾಮೆಯ ಸಮಯದಲ್ಲಿ ಸುಮಾರು 7 ಜನ ಸೇರಿದ್ದರು. ಅಪಘಾತ ನಡೆದ ಸ್ಥಳವು ಸುಮಾರು 60 ಅಡಿ ತಾರ್ ರಸ್ತೆಯಾಗಿರುತ್ತದೆ. ನಾನು ಯಾವುದೇ ಪಿರಿಯಾದುವನ್ನು ಪಡೆದಿಲ್ಲ ಎಂದರೆ ಸರಿಯಲ್ಲ. ನಾನು ಯಾವುದೇ ಸ್ಥಳಕ್ಕೆ ಹೋಗಿಲ್ಲ ಹಾಗೂ ಪಂಚನಾಮೆಯನ್ನು ಮಾಡಿಲ್ಲ ಎಂದರೆ ಸರಿಯಲ್ಲ. ನಾನು ಯಾವುದೇ ಹೇಳಿಕೆಗಳನ್ನು ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. ಅಪಘಾತವಾದ ವಾಹನದ ಬಣ್ಣ ಮತ್ತು ಕಂಪೆನಿ ಗೊತ್ತಿಲ್ಲ ಎಂದರೆ ಸರಿಯಲ್ಲ. ನಾನು ನನ್ನ ಮುಖ್ಯ ವಿಚಾರಣೆಯಲ್ಲಿ ಹೇಳಿದ ಎಲ್ಲಾ ವಿಚಾರಗಳು ಸುಳ್ಳು ಎಂದರೆ ಸರಿಯಲ್ಲ. ನಾನು ಸುಳ್ಳು ಸಾಕ್ಷಿಯನ್ನು ಹೇಳುತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಕಂಪ್ಯೂಟರೀಕರಣಗೊಳಿಸಿ ಪ್ರಿಂಟ್ ತೆರೆಯಲಾಯಿತು.)

ಓ. ಹೇ. ಕೇ. ಸರಿ. ಇದೆ.

ಸಹಿ/-
ಅಧಿಕ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ. ಶಿರಾ.